ಸದಸ್ಯರ ಹೆಸರು: ಶ್ರೀ ಚಂದ್ರಶೇಖರಪ್ಪ ಹೆಚ್.ಎಂ.(ಶಿವಮೊಗ್ಗ)

ಉತ್ತರಿಸುವ ಸಚಿವರು: ಡಾ॥ಎ.ಬಿ.ಮಾಲಕರೆಡ್ಡಿ(ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಪ್ರಶ್ನೆ

ಅ) ಶಿವಮೊಗ್ಗ ತಾ.ಗಾಜನೂರು ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಅಲ್ಲಿನ ಜನರಿಗೆ ಆರೋಗ್ಯ ಸೌಲಭ್ಯವನ್ನು ಕಲ್ಪಿಸಲು ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರು ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು)

ಉತ್ತರ

ಅ) ಭಾರತ ಸರ್ಕಾರವು 9ನೇ ಪಂಚವಾರ್ಷಿಕ ಯೋಜನೆಯಡಿಯಲ್ಲಿ ಕರ್ನಾಟಕ ರಾಜ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸಲು "ಶೂನ್ಯಗುರಿ" ನಿಗದಿಪಡಿಸಿರುವುದರಿಂದ ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸಲಾಗುತ್ತಿಲ್ಲ.

ಆ) ಉದ್ಭವಿಸುವುದಿಲ್ಲ.

ಚಿಂತಾಮಣಿ ತಾಲ್ಲೂಕಿನ ಕೇತನಹಳ್ಳಿ ಗ್ರಾಮದ ಬಳಿ ಹೊಸ ಕೆರೆಗೆ ಹೆಚ್ಚುವರಿ ಅನುದಾನ ಬಿಡುಗಡೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 208(704)

ಸದಸ್ಯರ ಹೆಸರು: ಶ್ರೀ ಚೌಡರೆಡ್ಡಿ(ಚಿಂತಾಮಣಿ):

ಉತ್ತರಿಸುವ ಸಚಿವರು: ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು)

ಪ್ರಶ್ನೆ

ಅ. ಚಿಂತಾಮಣಿ ಕ್ಷೇತ್ರಕ್ಕೆ ಸೇರಿದ ಕೇತನಾಯಕನಹಳ್ಳಿ ಗ್ರಾಮದ ಬಳಿ ಹೊಸ ಕೆರೆ ಕಾಮಗಾರಿಯನ್ನು 2000-2001ರ ಸಾಲಿನಲ್ಲಿ ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ. 4702 ಹೊಸ ಕೆರೆಗಳ ನಿರ್ಮಾಣ ಯೋಜನೆ ಲೆಕ್ಕ ಶೀರ್ಷಿಕೆಯಡಿ ಎಷ್ಟು ಹಣ ಮಂಜೂರಾಗಿದೆ ಎಂಬುದನ್ನು ತಿಳಿಸುವುದು?

ಇ. ಸದರಿ ಕೆರೆಯ ಕಾಮಗಾರಿಗೆ ಇನ್ನು 3 ಲಕ್ಷ ರೂಪಾಯಿ ಮೊತ್ತದ ಬಿಲ್ಲುಗಳು ಜಿಲ್ಲಾ ಪಂಚಾಯತಿ ಕೋಲಾರದಲ್ಲಿ ಒಪ್ಪಿಗೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ. 3 ಲಕ್ಷ ರೂಪಾಯಿ ಮೊತ್ತದ ಬಿಲ್ಲುಗಳು ಜಿಲ್ಲಾ ಪಂಚಾಯ್ತಿಯಲ್ಲಿ ನೆನೆಗುದಿಗೆ ಬಿದ್ದಿರುವುದನ್ನು ಘನ ಸರ್ಕಾರ ಪಾವತಿಸಲು ಕ್ರಮ ತೆಗೆದುಕೊಳ್ಳಲಾಗುವುದೆ?

ಉತ್ತರ

ಅ. ಬಂದಿದೆ.

ಆ. 2001-2002ನೇ ಸಾಲಿನಲ್ಲಿ ಕೋಲಾರ ಜಿಲ್ಲೆಗೆ 4702 ಹೊಸ ಕೆರೆ ನಿರ್ಮಾಣಕ್ಕೆ ಅನುದಾನ ನಿಗದಿಪಡಿಸಿರುವುದಿಲ್ಲ.

ಇ. ಬಂದಿದೆ.

ಈ. 2002-2003ನೇ ಸಾಲಿನ ಕೋಲಾರ ಜಿಲ್ಲಾ ಪಂಚಾಯತ್ ಆಯವ್ಯಯದಲ್ಲಿ ಅನುದಾನ ಲಭ್ಯತೆಗೆ ಅನುಗುಣವಾಗಿ ಸದರಿ ಬಿಲ್ಲನ್ನು ಆದ್ಯತೆ ಮೇಲೆ ಪಾವತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಗ್ರಾಮೀಣ ರೋಜ್‌ಗಾರ್ ಯೋಜನಾ ಕಾರ್ಯಕ್ರಮಗಳ ಪಟ್ಟಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 209(705)

ಸದಸ್ಯರ ಹೆಸರು: ಶ್ರೀ ಚೌಡರೆಡ್ಡಿ (ಚಿಂತಾಮಣಿ)

ಉತ್ತರಿಸುವ ಸಚಿವರು: ಶ್ರೀ ಎಂ.ವೈ.ಘೋರ್ಪಡೆ(ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು)

ಪ್ರಶ್ನೆ

ಅ) ಬಾಗೇಪಲ್ಲಿ ತಾಲ್ಲೂಕು ಪಂಚಾಯ್ತಿಯವರು ದಿನಾಂಕ 1.12.2001ರಲ್ಲಿ ಬಾಗೇಪಲ್ಲಿ ತಾಲ್ಲೂಕು ಪಂಚಾಯ್ತಿ ಕಛೇರಿಯಲ್ಲಿ ಸಭೆ ಸೇರಿ ಸಂಪೂರ್ಣ ಗ್ರಾಮೀಣಾ